ನುಡಿ ಜೇನು ಸೋಮವಾರ 13 ನವೆಂಬರ್ 2023 nudijenu@gmail.com | 7406756340 | nudijenukannada | @nudijenu

# ವಿಡಿಐಟಿಯಿಂದ ತಾಂತ್ರಿಕ ವಿಷಯಗಳನ್ನೊಳಗೊಂಡ ಕನ್ನಡ ಪುಸ್ತಕಗಳ ವಿತರಣೆ

ನುಡಿಜೇನು ವರದಿ

**ಹಳಿಯಾಳ:** ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯವು ಕನ್ನಡ ಭಾಷೆಯಲ್ಲಿ ತಾಂತ್ರಿಕ ಶಿಕ್ಷಣದ ಅರಿವು ಮೂಡಿಸಲು ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ತಾಂತ್ರಿಕ ವಿಷಯಗಳನ್ನೊಳಗೊಂಡ ಕನ್ನಡ ಪುಸ್ತಕವನ್ನು ಉಚಿತವಾಗಿ ವಿತರಿಸಿತು.



ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿಯ ಪ್ರಸರಣ ವಿಭಾಗವು ಮುದ್ರಿಸಿರುವ 76 ತಾಂತ್ರಿಕ ವಿಷಯಗಳ ಕನ್ನಡ ಪುಸ್ತಕವನ್ನು ಮಹಾವಿದ್ಯಾಲಯವು ಖರೀದಿಸಿ ತಾಲ್ಲೂಕಿನ ಚಿಬ್ಬಲಗೇರಿ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ವಿತರಿಸಿದೆ. ಪುಸ್ತಕಗಳನ್ನು ವಿತರಿಸಿ ಮಾತನಾಡಿದ ಮಹಾವಿದ್ಯಾಲಯದ ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಡಿ., ಕನ್ನಡ ಮಾಧ್ಯಮದಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನದ ಕುರಿತು ಮಾಹಿತಿಯನ್ನು ಕನ್ನಡದಲ್ಲಿ ತಿಳಿದುಕೊಳ್ಳುವುದರಿಂದ ವಿಷಯದಲ್ಲಿ ಆಳವಾದ ಜ್ಞಾನವನ್ನು ಹೊಂದಬಹುದಾಗಿದೆ. ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಲು ಮಹಾವಿದ್ಯಾಲಯವು ಈ ಉಪಕ್ರಮವನ್ನು ಕೈಗೊಂಡಿದೆ ಎಂದು ಹೇಳಿದರು.

ಪ್ರೌಢಶಾಲಾ ಮುಖ್ಯೋಪಾಧ್ಯಾಯ ನಾಗರಾಜ ಬಿ., ಮಕ್ಕಳಲ್ಲಿ ತಾಂತ್ರಿಕ ಜ್ಞಾನಾಭಿವೃದ್ಧಿಗೆ ಮಹಾವಿದ್ಯಾಲಯವು ಉಚಿತವಾಗಿ ಪುಸ್ತಕಗಳನ್ನು ವಿತರಿಸಿರುವುದು ತಮ್ಮ ವಿದ್ಯಾರ್ಥಿಗಳಿಗೆ ಸಂತಸ ತಂದಿದೆ ಹಾಗೂ ವಿಡಿಐಟಿ ಮಹಾವಿದ್ಯಾಲಯಕ್ಕೆ ತಾವು ಆಭಾರಿಯಾಗಿದ್ದೇನೆಂದು ಹೇಳಿದರು. ಮಹಾವಿದ್ಯಾಲಯದ ವಿವಿಧ ವಿಭಾಗದ ಡೀನ್‌ಗಳು ಮತ್ತು ವಿಭಾಗ ಮುಖ್ಯಸ್ಥರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಇದುವರೆಗೆ ಐದು ಶಾಲೆಗಳಿಗೆ ತಾಂತ್ರಿಕ ಪುಸ್ತಕಗಳನ್ನು ಉಚಿತ ವಾಗಿ ನೀಡಲಾಗಿದೆ. ಕನ್ನಡ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಕನ್ನಡ ಭಾಷೆಯಲ್ಲಿರುವ ತಾಂತ್ರಿಕ ಪುಸ್ತಕಗಳ ಅವಶ್ಯವಿದ್ದಲ್ಲಿ ಆಡಳಿತ ವಿಭಾಗದ ಡೀನ್ ಆದ ಪ್ರೊ. ಮಂಜುನಾಥ (ಮೊ.ಸಂ.: 98801 38746) ಅವರನ್ನು ಸಂಪರ್ಕಿಸುವಂತೆ ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

ಲೋಕಧ್ವನಿ

# ಕನ್ನಡ ತಂತ್ರಜ್ಞಾನ ಪುಸ್ತಕ ಉಚಿತ ವಿತರಣೆ




**ಹಳಿಯಾಳ:** ಕೆ.ಎಲ್.ಎಸ್.ವಿ.ಡಿ.ಐ.ಟಿ. ಮಹಾವಿದ್ಯಾಲಯವು ಕನ್ನಡ ಭಾಷೆಯಲ್ಲಿ ತಾಂತ್ರಿಕ ಶಿಕ್ಷಣದ ಅರಿವು ಮೂಡಿಸಲು ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ತಾಂತ್ರಿಕ ವಿಷಯಗಳನ್ನೊಳಗೊಂಡ ಕನ್ನಡ ಪುಸ್ತಕವನ್ನು ಉಚಿತವಾಗಿ ವಿತರಿಸಿತು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿಯ ಪ್ರಸರಣ ವಿಭಾಗವು ಮುದ್ರಿಸಿರುವ 76 ತಾಂತ್ರಿಕ ವಿಷಯಗಳ ಕನ್ನಡ ಪುಸ್ತಕವನ್ನು ಮಹಾವಿದ್ಯಾಲಯವು ಖರೀದಿಸಿ ಹಳಿಯಾಳ ತಾಲ್ಲೂಕಿನ ಚಿಬ್ಬಲಗೇರಿ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ವಿತರಿಸಿದೆ.

ಪುಸ್ತಕಗಳನ್ನು ವಿತರಿಸಿ ಮಾತನಾಡಿದ ಮಹಾವಿದ್ಯಾಲಯದ ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಡಿ ಕನ್ನಡ ಮಾಧ್ಯಮದಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನದ ಕುರಿತು ಮಾಹಿತಿಯನ್ನು ಕನ್ನಡದಲ್ಲಿ ತಿಳಿದುಕೊಳ್ಳುವುದರಿಂದ ವಿಷಯದಲ್ಲಿ ಆಳವಾದ ಜ್ಞಾನವನ್ನು ಹೊಂದಬಹುದಾಗಿದೆ ಮತ್ತು ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಲು ಮಹಾವಿದ್ಯಾಲಯವು ಈ ಉಪಕ್ರಮವನ್ನು ಕೈಗೊಂಡಿದೆ ಎಂದು ಹೇಳಿದರು.

ಪ್ರೌಢಶಾಲಾ ಮುಖ್ಯೋಪಾಧ್ಯಾಪಕ ರಾದ ನಾಗರಾಜ ಬಿ ಮಕ್ಕಳಲ್ಲಿ ತಾಂತ್ರಿಕ ಜ್ಞಾನಾಭಿವೃದ್ಧಿಗೆ ಮಹಾವಿದ್ಯಾಲಯವು ಉಚಿತವಾಗಿ ಪುಸ್ತಕಗಳನ್ನು ವಿತರಿಸಿ ರುವುದು ತಮ್ಮ ವಿದ್ಯಾರ್ಥಿಗಳಿಗೆ ಸಂತಸ ತಂದಿದೆ ಹಾಗೂ ವಿ.ಡಿ.ಐ.ಟಿ. ಮಹಾವಿದ್ಯಾಲಯಕ್ಕೆ ತಾವು ಆಭಾರಿಯಾಗಿದ್ದೇನೆಂದು ಹೇಳಿದರು.

ಮಹಾವಿದ್ಯಾಲಯದ ವಿವಿಧ ವಿಭಾಗದ ಡೀನ್ ಗಳು ಮತ್ತು ವಿಭಾಗ ಮುಖ್ಯಸ್ಥರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಇದುವರೆಗೆ ಐದು ಶಾಲೆಗಳಿಗೆ ತಾಂತ್ರಿಕ ಪುಸ್ತಕಗಳನ್ನು ಉಚಿತ ವಾಗಿ ನೀಡಲಾಗಿದೆ. ಕನ್ನಡ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಕನ್ನಡ ಭಾಷೆಯಲ್ಲಿರುವ ತಾಂತ್ರಿಕ ಪುಸ್ತಕಗಳ ಅವಶ್ಯವಿದ್ದಲ್ಲಿ ಆಡಳಿತ ವಿಭಾಗದ ಡೀನ್ ಆದ ಪ್ರೊ. ಮಂಜುನಾಥ (ಮೊ. ಸಂ. 9880138746) ಇವರನ್ನು ಸಂಪರ್ಕಿಸುವಂತೆ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Edition
Nov 13, 2023 Page No. 3
Powered by : eReleGo.com